ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

2019-20 ನೇ ಸಾಲಿನಲ್ಲಿ ನಬಾರ್ಡ್ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಯ ಬಗ್ಗೆ

ಶ್ರೀ ಯು. ಬಿ. ವೆಂಕಟೇಶ್(ನಾಮನಿರ್ದೇಶನ ಹೊಂದಿದವರು) -

1124 (1235) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2019-20ನೇ ಸಾಲಿನಲ್ಲಿ ನಬಾರ್ಡ್ ಯೋಜನೆಯಡಿಯಲ್ಲಿ ಕೈಗೊಂಡಿರುವ ರಸ್ತೆ, ಸೇತುವೆ ಮತ್ತು ಕಟ್ಟಡ ಕಾಮಗಾರಿಗಳು ಎಷ್ಟು; ಇದರಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿರುತ್ತವೆ; ಉಳಿಕೆ ಕಾಮಗಾರಿಗಳು ಎಷ್ಟು;

(ಆ) ಕಳೆದ ಮೂರು ವರ್ಷಗಳಿಂದ ನಬಾರ್ಡ್ ಯೋಜನೆಯಡಿಯಲ್ಲಿ ಪೂರ್ಣಗೊಳ್ಳದೆ ಉಳಿದಿರುವ ಕಾಮಗಾರಿಗಳು ಎಷ್ಟು; ಇವು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಇವುಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಪೂರ್ಣಗೊಳ್ಳದೆ ಇರುವ ಕಾಮಗಾರಿಗಳಿಂದ ಸರ್ಕಾರಕ್ಕೆ ಆದ ನಷ್ಟ ಎಷ್ಟು; ಇದನ್ನು ಗುತ್ತಿಗೆದಾರರಿಂದ ವಸೂಲು ಮಾಡಲಾಗುತ್ತಿದೆಯೇ; ಹಾಗಿದ್ದಲ್ಲಿ, ಈವರೆಗೆ ಎಷ್ಟು ಮೊತ್ತವನ್ನು ವಸೂಲು ಮಾಡಲಾಗಿದೆ? (ವಿವರವನ್ನು ನೀಡುವುದು)